ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1433 (1659)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

ವಿಷಯ : ಕೋವಿಡ್ ನಿಯಂತ್ರಣಕ್ಕಾಗಿ ನಿಯೋಜನೆಗೊಂಡಿರುವ ಕಾರ್ಯಕರ್ತೆಯರ ಬಗ್ಗೆ

(ಅ) ಕೋವಿಡ್ ನಿಯಂತ್ರಣಕ್ಕಾಗಿ ನಿಯೋಜನೆಗೊಂಡ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; ಈ ಪೈಕಿ ಕೋವಿಡ್ ಕಾಯಿಲೆಗೆ ತುತ್ತಾಗಿ ಚೇತರಿಸಿಕೊಂಡವರ ಸಂಖ್ಯೆ ಎಷ್ಟು; ಮತ್ತು ಮರಣ ಹೊಂದಿದ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕೋವಿಡ್ ನಿಯಂತ್ರಣಕ್ಕಾಗಿ ನಿಯೋಜನೆಗೊಂಡು, ಈ ಕಾಯಿಲೆಗೆ ತುತ್ತಾಗಿ ಮರಣ ಹೊಂದಿದ ಅಂಗನವಾಡಿ ಕಾರ್ಯಕರ್ತೆಯರಿಗೆ ಸರ್ಕಾರವು ಘೋಷಿಸಿರುವಂತೆ ವಿಮಾ ಪರಿಹಾರವನ್ನು ನೀಡಿದೆಯೇ; ನೀಡಿದ್ದಲ್ಲಿ, ಎಷ್ಟು ಜನ ಕಾರ್ಯಕರ್ತೆಯರಿಗೆ ಎಷ್ಟೆಷ್ಟು ಪರಿಹಾರ ನೀಡಲಾಗಿದೆ; (ಜಿಲ್ಲಾವಾರು ಮತ್ತು ಫಲಾನುಭವಿವಾರು ವಿವರ ನೀಡುವುದು)

(ಇ) ಕೋವಿಡ್ ನಿಯಂತ್ರಣಕ್ಕಾಗಿ ನಿಯೋಜನೆಗೊಂಡಿರುವ ಅಂಗನವಾಡಿ ಕಾರ್ಯಕರ್ತೆಯರ ಆರೋಗ್ಯ ರಕ್ಷಣೆಗಾಗಿ ಸರ್ಕಾರವು ಒದಗಿಸುತ್ತಿರುವ ಸವಲತ್ತುಗಳೇನು? (ವಿವರ ನೀಡುವುದು)